ರೇಷ್ಮೆ ಮಾರುಕಟ್ಟೆಗಳಲ್ಲಿ ಅವ್ಯವಹಾರ

389- ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ರೇಷ್ಮೆ ಮತ್ತು ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದ ವಿವಿಧ ರೇಷ್ಮೆ ಮಾರುಕಟ್ಟೆಗಳಲ್ಲಿ ನಡೆಯುತ್ತಿರುವ ಅವ್ಯವಹಾರ ಅಕ್ರಮಗಳು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು?*

ಇ) *ಹಾಗಿದ್ದಲ್ಲಿ ರೇಷ್ಮೆ ಗೂಡು ಮಾರಾಟಕ್ಕೆಂದು ಮಾರುಕಟ್ಟೆಗೆ ಬರುವ ರೈತರ ಶೋಷಣೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಈ) *ಬಂದಿದ್ದರೆ ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು?*

ಉ) *ರಾಮನಗರ, ಕೊಳ್ಳೇಗಾಲ ಹಾಗೂ ಸಂತೇಮರಹಳ್ಳಿಯ ರೇಷ್ಮೆ ಮಾರುಕಟ್ಟೆಗಳಲ್ಲಿ ನಕಲಿ ಲೈಸೆನ್ಸ್‌ಗಳನ್ನು ಪಡೆದು ರೈತರನ್ನು ಶೋಷಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಊ) *ಹಾಗಿದ್ದಲ್ಲಿ ಈ ನಕಲಿ ಲೈಸೆನ್ಸ್ ಪಡೆದವರ ಮೇಲೆ ತೆಗೆದುಕೊಂಡಿರುವ ಕ್ರಮಗಳು ಯಾವುವು?*

ಶ್ರೀ ಎಂ. ಮಹದೇವ (ರೇಷ್ಮೆ ಮತ್ತು ಜವಳಿ ಸಚಿವರು) :

ಅ) ಕೆಲವು ಮಾರುಕಟ್ಟೆಗಳಲ್ಲಿ ಕೆಲವರಿಂದ ನಡೆದಿರುವ ಅವ್ಯವಹಾರಗಳು ಗಮನಕ್ಕೆ ಬಂದಿದೆ.

ಆ) ಅಕ್ರಮಗಳನ್ನು ತಡೆಯಲು ಕಠಿಣ ಕ್ರಮಗಳನ್ನು ಇಲಾಖಾ ಮತಿಯಿಂದ ಹಾಗೂ ಪೋಲೀಸ್ ಇಲಾಖೆಯ ನೆರವಿನಿಂದ ಕೈಗೊಳ್ಳಲಾಗುತ್ತಿದೆ.

ಇ) ಕೆಲವೇ ಮಾರುಕಟ್ಟೆಗಳಲ್ಲಿ ಈ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಈ) ಇಂತಹ ಸಂದರ್ಭಗಳಲ್ಲಿ ರೈತರಿಗಾಗುತ್ತಿದ್ದ ಶೋಷಣೆಗಳನ್ನು ತಪ್ಪಿಸಲು ಇಲಾಖೆಯ ಸಿಬ್ಬಂದಿಯ ಜೊತೆಗೆ ಪೋಲಿಸರ ನೆರವನ್ನು ಪಡೆಯಲಾಗುತ್ತಿದೆ.

ಉ) ಇಲ್ಲ. ಆದರೆ ಈ ಮಾರುಕಟ್ಟೆಗಳಲ್ಲಿ ಕೆಲವು ನೂಲು ಬಿಚ್ಚಲು ರಹದಾರಿಯನ್ನು ಪಡೆದ ನಂತರ ನೂಲು ಬಿಚ್ಚಾಣಿಕೆ ಮಾಡಿದೆ ಮಾರುಕಟ್ಟೆ ವಹಿವಾಟಿನಲ್ಲಿ ಭಾಗವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಊ) ಮೇಲೆ ವಿವರಿಸಿದಂತೆ ಕೆಲವರು ನೂಲು ಬಿಚ್ಚಲು ರಹದಾರಿ ಪಡೆದು ನೂಲು ಬಿಚ್ಚಾಣಿಕೆಯಲ್ಲಿ ತೊಡಗಿರುವುದಿಲ್ಲ. ಇಂತಹ ವ್ಯಕ್ತಿಗಳ ಮೇಲೆ ಕಾನೂನು ರೀತಿಯ ಕ್ರಮ ಕೈಗೊಳ್ಳಲಾಗುತ್ತಿದೆ.